# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಕಾರ್ಯಕ್ರಮದಡಿ ಕೇಂದ್ರ ಭೂ ಸಂಪನ್ಮೂಲ ಇಲಾಖೆಯಿಂದ ಬಿಡುಗಡೆಯಾದ ಕೇಂದ್ರದ ಪಾಲಿನ ಅನುದಾನಕ್ಕೆ ರಾಜ್ಯದ ಪಾಲಿನ ಅನುದಾನವನ್ನು ಸೇರಿಸಿ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: Z-11011/06/2009-PPC, ದಿನಾಂಕ:27.05.2019.
3. ದಿನಾಂಕ:21.06.2019ರಂದು ನಡೆದ ರಾಜ್ಯಮಟ್ಟದ ಮಂಜೂರಾತಿ ಸಭೆ(SSLC) ಸಭೆಯ ನಡವಳಿಗಳು.
4. ಸರ್ಕಾರದ ಆದೇಶ ಸಂಖ್ಯೆ:ಕೃಇ 15 ಕೃಉಇ 2019, ದಿನಾಂಕ:05.08.2019.
5. ಸರ್ಕಾರದ ಆದೇಶ ಸಂಖ್ಯೆ:ಕೃಇ 86 ಕೃಉಇ 2019, ದಿನಾಂಕ:28.08.2019
6. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: K-11011/06/2009-PPC, ದಿನಾಂಕ:30.08.2019.
7. ಸರ್ಕಾರದ ಆದೇಶ ಸಂಖ್ಯೆ: ಕೃಇ 15 ಕೃಉಇ 2019, ದಿನಾಂಕ:27.09.2019
8. ಸರ್ಕಾರದ ಆದೇಶ ಸಂಖ್ಯೆ:ಕೃಇ 15 ಕೃಉಇ 2019, ದಿನಾಂಕ:27.01.2020.
9. ಜಲಾನಯನ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಜಅಇ/ಉಕೃನಿ/ಕೃಅ2/PMKSY-WD/2/ರಾಕೇಪಾಅಬಿ/19-20, ದಿನಾಂಕ:04.10.2019.

****

**ಪ್ರಸ್ತಾವನೆ:**

2019-20ನೇ ಸಾಲಿನ ಆಯವ್ಯಯ ಸಂಪುಟ-3 ರಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ(PMKSY)-ಜಲಾನಯನ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ:2402-00-102-0-30ಅಡಿ ಒಟ್ಟು ರೂ.16600.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ(PMKSY)- ಜಲಾನಯನ ಅಭಿವೃದ್ಧಿ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಲಾಗಿರುತ್ತದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ 2019-20ನೇ ಸಾಲಿಗೆ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಕಾರ್ಯಕ್ರಮಕ್ಕೆ ಕೇಂದ್ರ ಭೂ ಸಂಪನ್ಮೂಲ ಇಲಾಖೆಯು ರಾಜ್ಯಕ್ಕೆ ಒಟ್ಟು ರೂ.3637.00 ಲಕ್ಷಗಳನ್ನು ಕೇಂದ್ರದ ಪಾಲಿನ ಅನುದಾನವಾಗಿ ತಾತ್ಕಾಲಿಕವಾಗಿ ನಿಗದಿ ಪಡಿಸಿ ಹಂಚಿಕೆ ಮಾಡಿದೆ.

.....2

ಮೇಲೆ ಓದಲಾದ (3)ರ ದಿನಾಂಕ: 21.06.2019ರಂದು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ (SLSC) ಸಭೆಯಲ್ಲಿ 2019-20ನೇ ಸಾಲಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಕಾರ್ಯಕ್ರಮಕ್ಕೆ ರೂ.10711.00 ಲಕ್ಷಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-Other Interventions: Per Drop More Crop (PMKSY-OI-PDMC) ಕಾರ್ಯಕ್ರಮದಡಿ 2018-19ನೇ ಸಾಲಿನಲ್ಲಿ ಬಿಡುಗಡೆಗೆ ಬಾಕಿ ಉಳಿದಿದ್ದು, ಮರು ಮೌಲ್ಯೀಕರಣಗೊಂಡ ಅನುದಾನ ರೂ.3171.6667 ಲಕ್ಷಗಳನ್ನು 2019-20ನೇ ಸಾಲಿನಲ್ಲಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಬಿಡುಗಡೆ ಮಾಡಿ ಮಂಜೂರಾತಿ ನೀಡಿದೆ.

ಮೇಲೆ ಓದಲಾದ (5)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ (PMKSY)ಯಡಿಯ-PMKSY-WD & OI ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ 2016-17 ಮತ್ತು 2017-18ನೇ ಸಾಲುಗಳಲ್ಲಿ ಉಳಿಕೆಯಾಗಿದ್ದ ಮರುಮೌಲ್ಯೀಕರಣಗೊಂಡ ಅನುದಾನ ರೂ.595.00ಲಕ್ಷಗಳನ್ನು ಬಿಡುಗಡೆ ಮಾಡಿ 2019-20ನೇ ಸಾಲಿನಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ಮೇಲೆ ಓದಲಾದ (6)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಜಲಾನಯನ ಅಭಿವೃದ್ಧಿ ಘಟಕದ (PMKSY-WDC) ಕಾರ್ಯಕ್ರಮಕ್ಕೆ 2019-20ನೇ ಸಾಲಿನ ಮೊದಲ ಕಂತಿನ ಅನುದಾನವಾಗಿ ಒಟ್ಟು ರೂ.2176.00ಲಕ್ಷಗಳನ್ನು ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ (7)ರ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- -Other Interventions: Per Drop More Crop (PMKSY-OI-PDMC) ಕಾರ್ಯಕ್ರಮದಡಿ ಆಯವ್ಯಯದಲ್ಲಿ ಲಭ್ಯವಿರುವ ರೂ.6400.00 ಲಕ್ಷಗಳ ಅನುದಾನವನ್ನು ಕಾರ್ಯಕ್ರಮ ಅನುಷ್ಠಾನಗೊಳಿಸಲು ಬಿಡುಗಡೆ ಮಾಡಿ ಮಂಜೂರಾತಿ ನೀಡಿದೆ.

ಮೇಲೆ ಓದಲಾದ (8)ರ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- -Other Interventions: Per Drop More Crop (PMKSY-OI-PDMC) ಕಾರ್ಯಕ್ರಮದಡಿ ಆಯವ್ಯಯದಲ್ಲಿ ಲಭ್ಯವಿರುವ ರೂ.3106.443 ಲಕ್ಷಗಳ ಅನುದಾನವನ್ನು ಕಾರ್ಯಕ್ರಮ ಅನುಷ್ಠಾನಗೊಳಿಸಲು ಬಿಡುಗಡೆ ಮಾಡಿ ಮಂಜೂರಾತಿ ನೀಡಿದೆ.

ಮೇಲೆ ಓದಲಾದ (9)ರ ಜಲಾನಯನ ಅಭಿವೃದ್ಧಿ ಇಲಾಖೆ ಆಯುಕ್ತರ ಪ್ರಸ್ತಾವನೆಯಲ್ಲಿ, 2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ-ಇತರೆ ಉಪಚಾರಗಳು - ಪರ್ ಡ್ರಾಪ್

.....3

ಮೋರ್ ಕ್ರಾಪ್ (PMKSY-PDMC) ಯೋಜನೆಯಡಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದಿಂದ ಪ್ರಧಾನ ಕಾಮಗಾರಿಗಳಡಿ ಬಿಡುಗಡೆಯಾದ ಕೇಂದ್ರದ ಪಾಲು ರೂ.3309.20 ಲಕ್ಷಗಳಲ್ಲಿ ರೂ.60.8500 ಲಕ್ಷಗಳನ್ನು ಸಾಮಾನ್ಯ ವೆಚ್ಚಗಳು (051) ರಡಿ ಬಿಡುಗಡೆಮಾಡಲು ಕೋರಿದ್ದು, ಪ್ರಸ್ತುತ ಕೇಂದ್ರ ಭೂ ಸಂಪನ್ಮೂಲ ಇಲಾಖೆಯಿಂದ ಬಿಡುಗಡೆ ಮಾಡಲಾಗಿರುವ ಒಟ್ಟು ರೂ.4360.00 ಲಕ್ಷಗಳು (ಶೇ.60) ಹಾಗೂ ಸದರಿ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ.2906.6667 ಲಕ್ಷಗಳು (ಶೇ.40) ಸೇರಿದಂತೆ ಒಟ್ಟಾರೆ ರೂ.7266.6667 ಲಕ್ಷಗಳನ್ನು ಬಿಡುಗಡೆ ಮಾಡಬೇಕಿರುತ್ತದೆ. ಆದರೆ ಪ್ರಸ್ತುತ ಆಯವ್ಯಯದ ಲೆಕ್ಕ ಶೀರ್ಷಿಕೆ:2402-00-102-0-30 (ಯೋಜನೆ) ರಡಿ **ಒಟ್ಟು ರೂ.3326.8903 ಲಕ್ಷಗಳು** ಲಭ್ಯವಿರುವುದರಿಂದ ಸದರಿ ಅನುದಾನವನ್ನು ಕೂಡಲೇ ಬಿಡುಗಡೆ ಮಾಡುವಂತೆ ಕೋರಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 15 ಕೃಉಇ 2019, ಬೆಂಗಳೂರು, ದಿನಾಂಕ:12.03.2020.**

2019-20ನೇ ಸಾಲಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು-2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು-ಪರ್ ಡ್ರಾಪ್ ಮೋರ್ ಕ್ರಾಪ್ (PMKSY-OI-PDMC) ಯೋಜನೆಯಡಿ ಕೇಂದ್ರ ಸರ್ಕಾರದ ಭೂ ಸಂಪನ್ಮೂಲ ಇಲಾಖೆಯಿಂದ ಬಿಡುಗಡೆಯಾಗಿರುವ ಶೇ. 60ರಷ್ಟು ರೂ.4360.00ಲಕ್ಷಗಳಿಗೆ ರಾಜ್ಯದ ಪಾಲಿನ ಶೇ.40ರಷ್ಟು ಅನುದಾನ ರೂ.2906.6667 ಲಕ್ಷಗಳನ್ನು ಸೇರಿ ಒಟ್ಟು ರೂ.7266.6667 ಲಕ್ಷಗಳ ಅನುದಾನ ಒದಗಿಸಬೇಕಾಗಿದ್ದು, ಲೆಕ್ಕ ಶೀರ್ಷಿಕೆ:2402-00-102-0-30ರಡಿ ಆಯವ್ಯಯದಲ್ಲಿ ಲಭ್ಯವಿರುವ **ರೂ.3326.8903 ಲಕ್ಷಗಳ(ಮೂರು ಸಾವಿರದ ಮೂನ್ನೂರ ಇಪ್ಪತ್ತಾರು ಲಕ್ಷ ಎಂಬತ್ತೊಂಬತ್ತು ಸಾವಿರದ ಮೂವತ್ತು ರೂಪಾಯಿಗಳು)** ಅನುದಾನವನ್ನು ಈ ಕೆಳಕಂಡಂತೆ ಬಿಡುಗಡೆ ಮಾಡುತ್ತಾ, ಕಾರ್ಯಕ್ರಮ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ರೂ.ಲಕ್ಷಗಳಲ್ಲಿ

| ಕ್ರ.ಸಂ. | ಉಪ ಶೀರ್ಷಿಕೆ | ಕೇಂದ್ರದ ಪಾಲು(ಶೇ.60%) | ರಾಜ್ಯದ ಪಾಲು (ಶೇ.40%) | ಒಟ್ಟು |
|---|---|---|---|---|
| 1 | ಸಾಮಾನ್ಯ ವೆಚ್ಚಗಳು(051) | 60.85 | 40.5667 | 101.4167 |
| 4 | ಪ್ರಧಾನ ಕಾಮಗಾರಿಗಳು*(139) | 1933.4360 | 1288.9573 | 3222.3933 |
| 6 | ಗಿರಿಜನ ಉಪ ಯೋಜನೆ(423) | 1.8482 | 1.2321 | 3.0803 |
| | ಒಟ್ಟು | **1996.1342** | **1330.7561** | **3326.8903** |

ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 03.04.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 49 EXP-4/2019, ದಿನಾಂಕ: 06.03.2020ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

12/03/2020
(ಶಕುಂತಲಾ ಚೌಗಲಾ)
ಸರ್ಕಾರದ ಉಪ ಕಾರ್ಯದರ್ಶಿ-1
ಕೃಷಿ ಇಲಾಖೆ

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.